**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕನಕಪುರ**
**ಸಿ.ಸಿ ನಂ. 1180/2019**

ಚಾಸಾ : 5 ಪ್ರಾಸಾ : 5

| | |
|---|---|
| ಹೆಸರು | ಲೋಕೇಶ್ |
| ತಂದೆ ಹೆಸರು | ಶಿವಣ್ಣ |
| ವಯಸ್ಸು | 39 |
| ಉದ್ಯೋಗ | ಕೂಲಿ |
| ವಿಳಾಸ | ಕಂಚನಹಳ್ಳಿ |

**ದಿಃ 21.06.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-**

ದಿನಾಂಕಃ 20.07.2019 ರಂದು ಆರೋಪಿತರು ಚಾ.ಸಾ. 1 ರವರ ಜೊತೆ ಗಲಾಟೆ ಮಾಡಿ ಅವರ ಮೇಲೆ ಹಲ್ಲೆ ಮಾಡಿದ್ದರು. ನಾನು ಅವರನ್ನು ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿದ ನಂತರ ಅದೇ ದಿನ ಸಂಜೆ 7.30 ಗಂಟೆಗೆ ಪೋಲಿಸರು ಘಟನಾ ಸ್ಥಳಕ್ಕೆ ಬಂದಿದ್ದರು. ಆಗ ಚಾ.ಸಾ. 1 , ನಾನು ಹಾಗೂ ಚಾ.ಸಾ. 4 ರವರು ಇದ್ದೆವು. ಪೋಲಿಸರು ನಮ್ಮ ಸಮಕ್ಷಮ ಸ್ಥಳ ಪಂಚನಾಮೆ ಮಾಡಿ ನಮಗೆ ಓದಿ ಹೇಳಿ ಸ್ಥ.ಳದಲ್ಲೇ ಬಿದ್ದಿದ್ದ ಒಂದು ದೊಣ್ಣೆಯನ್ನು ನಮ್ಮ ಸಮಕ್ಷಮ ಅಮಾನತ್ತುಪಡಿಸಿಕೊಂಡರು. ಪಂಚನಾಮೆಗೆ ನಾನು, ಚಾ.ಸಾ. 1 , ಹಾಗೂ ಚಾ.ಸಾ. 4 ರವರು ಸಹಿ ಮಾಡಿದೇವೆ. ಸಾಕ್ಷಿ ಒಂದು ಪಂಚನಾಮೆಯನ್ನು ನೋಡಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಮತ್ತು ಪಂಚನಾಮೆಯನ್ನು ಗುರುತಿಸಿದ್ದು ಪಂಚನಾಮೆಯನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ.2(ಎ) ಎಂದು ಗುರುತಿಸಲಾಯಿತು. ದೊಣ್ಣೆಯನ್ನು

ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಒಂದು ದೊಣ್ಣೆಯನ್ನು ನೋಡಿ ಸದರಿ ದೊಣ್ಣೆ ಎಂದು ಗುರುತಿಸಿದ್ದು ಅದನ್ನು ಈಗಾಗಲೇ ಎಂ.ಓ 1 ಎಂದು ಗುರುತಿಸಲಾಗಿದೆ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಗಲಾಟೆ ದಿನಾಂಕಃ 18.07.2019 ರಂದು ಆಗಿದ್ದು ಪೋಲಿಸರು ಪಂಚನಾಮೆ ಯನ್ನು ದಿನಾಂನಕಃ 20.07.2019 ರಂದು ಬೆಳಗ್ಗೆ 10 ಗಂಟೆಯಿಂದ 10.40 ಗಂಟೆಯವರೆಗೆ ಪಂಚನಾಮೆಯನ್ನು ಮಾಡಿದರು ಎಂದರೆ ಸರಿಯಲ್ಲ.

**ಪಾಟೀ ಸವಾಲು:** ಆರೋಪಿ ಪರ ವಕೀಲರು ಪಾಟೀಸವಾಲಿಗೆ ಸಮಯ ಕೋರಿದ್ದು ಕಾಲಾವಕಾಶವನ್ನು ನೀಡಲಾಯಿತು.

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)

ಓ ಹೇ ಕೇ ಸರಿ ಇದೆ,

ಮೂರನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ., ಕನಕಪುರ.